ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 746

ಸದಸ್ಯರ ಹೆಸರು : ಶ್ರೀ ಯು.ಬಿ.ವೆಂಕಟೇಶ್

ಉತ್ತರಿಸುವ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸುವ ದಿನಾಂಕ : 25-09-2020

ಕ್ರ ಸಂ.	ಪ್ರಶ್ನೆ	ಉತ್ತರ
ಅ.	ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಲ್ದಾಣಗಳಲ್ಲಿ ಮಳಿಗೆಗಳನ್ನು ಹೊಂದಿದ್ದವರು ಲಾಕ್‌ಡೌನ್ ಅವಧಿಯಲ್ಲಿ ವ್ಯಾಪಾರವಿಲ್ಲದೆ ನಷ್ಟ ಅನುಭವಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಸರ್ಕಾರದ ಗಮನಕ್ಕೆ ಬಂದಿದೆ.
ಆ.	ಬಂದಿದ್ದಲ್ಲಿ, ಈ ಲಾಕ್‌ಡೌನ್ ಅವಧಿಯ ಬಾಡಿಗೆಯನ್ನು ಮನ್ನಾ ಮಾಡುವ ಬಗ್ಗೆ ಸರ್ಕಾರ ನಿರ್ಣಯ ಕೈಗೊಂಡಿದೆಯೇ;	ಲಾಕ್‌ಡೌನ್ ಅವಧಿಯ ಪರವಾನಗಿ ಶುಲ್ಕವನ್ನು ಮನ್ನಾ ಮಾಡಲು ನಿರ್ಣಯವನ್ನು ಕೈಗೊಳ್ಳಲಾಗಿರುತ್ತದೆ.
ಇ.	ಕೈಗೊಂಡಿದ್ದಲ್ಲಿ, ಎಷ್ಟು ತಿಂಗಳ ಅವಧಿಗೆ ಬಾಡಿಗೆ ಮನ್ನಾ ಮಾಡಲು ಉದ್ದೇಶಿಸಿದೆ?	ಕೋವಿಡ್-19ರ ಲಾಕ್‌ಡೌನ್ ಹಿನ್ನೆಲೆಯಲ್ಲಿ ಕ.ರಾ.ರ.ಸಾ.ನಿಗಮದ ವ್ಯಾಪ್ತಿಯ ಬಸ್ ನಿಲ್ದಾಣಗಳಲ್ಲಿನ (ಎಟಿಎಂ ಕೌಂಟರ್ ಮತ್ತು ಮೊಬೈಲ್ ಟವರ್ ಪರವಾನಗಿದಾರರನ್ನು ಹೊರತುಪಡಿಸಿ) ಎಲ್ಲಾ ಮಳಿಗೆಗಳ ಪರವಾನಗಿದಾರರಿಗೆ ಪರವಾನಗಿ ಶುಲ್ಕ ಮನ್ನಾ ಮಾಡಲು ಈಗಾಗಲೇ ಕೆಳಕಂಡಂತೆ ಕ್ರಮ ವಹಿಸಲಾಗಿದೆ: • ದಿನಾಂಕ 22.03.2020 ರಿಂದ 31.03.2020 ರವರೆಗೆ ಪರವಾನಗಿ ಶುಲ್ಕವನ್ನು ಪೂರ್ಣವಾಗಿ ಮನ್ನಾ ಮಾಡಲಾಗಿದೆ. • ಏಪ್ರಿಲ್-2020 ಮತ್ತು ಮೇ-2020 ಈ ಎರಡೂ ಮಾಹೆಗಳಲ್ಲಿ ಪರವಾನಗಿ ಶುಲ್ಕವನ್ನು ಪೂರ್ಣವಾಗಿ ಮನ್ನಾ ಮಾಡಲಾಗಿದೆ. • ಜೂನ್-2020ರ ಮಾಹೆಯಲ್ಲಿ ನಿಗದಿತ ಮಾಸಿಕ ಪರವಾನಗಿ ಶುಲ್ಕದಲ್ಲಿ ಶೇಕಡ 90% ರಷ್ಟು ಮನ್ನಾ ಮಾಡಲಾಗಿದೆ. • ಜುಲೈ-2020ರ ಮಾಹೆಯಲ್ಲಿ ಪೂರ್ಣ ಪರವಾನಗಿ ಶುಲ್ಕವನ್ನು ಮನ್ನಾ ಮಾಡಲಾಗಿದೆ. • ಆಗಸ್ಟ್-2020ರ ಮಾಹೆಯಲ್ಲಿ ಮಳಿಗೆಗಳಿಗೆ ನಿಗದಿತ ಮಾಸಿಕ ಪರವಾನಗಿ ಶುಲ್ಕದಲ್ಲಿ ಶೇಕಡ 85% ರಷ್ಟು, ಹಾಗೂ ಹೋಟೆಲ್ / ಫಲಹಾರ ಮಂದಿರಗಳಿಗೆ ಪರವಾನಗಿ ಶುಲ್ಕದಲ್ಲಿ ಶೇ.90 ರಷ್ಟು ಮನ್ನಾ ಮಾಡಲಾಗಿದೆ. • ಸೆಪ್ಟಂಬರ್-20ರ ಮಾಹೆಯಲ್ಲಿ ನಿಗದಿತ ಮಾಸಿಕ ಪರವಾನಗಿ ಶುಲ್ಕದಲ್ಲಿ ಶೇಕಡ 50% ರಷ್ಟು ಪರವಾನಗಿ ಶುಲ್ಕವನ್ನು ಮನ್ನಾ ಮಾಡಲು ಕ್ರಮ ವಹಿಸಲಾಗಿದೆ.

ಸಂಖ್ಯೆ: ಟಿಡಿ 162 ಟಿಸಿಕ್ಯೂ 2020

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯ ಮಂತ್ರಿಗಳು ಹಾಗೂ
ಸಾರಿಗೆ ಸಚಿವರು